ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಹೇಮಾವತಿ ಜಲಾಶಯದಿಂದ ತುಮಕೂರು ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1302 (1487) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿರುವ ಕೆರೆಗಳಿಗೆ ನೀರು ತುಂಬಿಸಲು ಹೇಮಾವತಿ ನಾಲಾ ವ್ಯಾಪ್ತಿಗೆ ಬರುವ ಕೆರೆಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) 2019-20ನೇ ಸಾಲಿನಲ್ಲಿ ಹೇಮಾವತಿ ನಾಲಾ ವ್ಯಾಪ್ತಿಗೆ ಬರುವ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; ಇದಕ್ಕಾಗಿ ಕೈಗೊಂಡಿರುವ ಕಾಮಗಾರಿಗಳಾವುವು; ಮತ್ತು ಇದಕ್ಕೆ ಖರ್ಚು ಮಾಡಿರುವ ಹಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇಲ್ಲಿಯ ತನಕ ಎಷ್ಟು ಟಿ.ಎಂ.ಸಿ ನೀರನ್ನು ತುಮಕೂರು ಜಿಲ್ಲೆಗೆ ಹರಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಬರುವ ಕೆರೆಗಳಿಗೆ ಹೇಮಾವತಿ ನಾಲೆಯಿಂದ ಸರಾಗವಾಗಿ ನೀರು ಹರಿದು ಬರಲು ವೈಜ್ಞಾನಿಕವಾಗಿ ಕಾರ್ಯಕ್ರಮಗಳನ್ನು ರೂಪಿಸಿ ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ಕೆರೆಗಳಿಗೆ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) 2016-17ನೇ ಸಾಲಿನಲ್ಲಿ ಈ ನಾಲಾ ವ್ಯಾಪ್ತಿಯಲ್ಲಿ ಕೈಗೊಳ್ಳುವ ಕಾಮಗಾರಿಗಳು ಯಾವುವು ; ಹಾಗೂ ಇದಕ್ಕಾಗಿ ಸದರಿ ಸಾಲಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಊ) ಹೇಮಾವತಿ ನಾಲಾ ವ್ಯಾಪ್ತಿಯಲ್ಲಿರುವ ಪ್ರಮುಖ ನಾಲೆಗಳ ವಿಸ್ತೀರ್ಣ ಉಪನಾಲೆಗಳ ವಿಸ್ತೀರ್ಣ ಇತರೆ ನಾಲೆಗಳ ವಿಸ್ತೀಣವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)